ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

397 (586) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಉಚಿತವಾಗಿ ಡಯಾಲಿಸಿಸ್ ಮಾಡಿಸಲು ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ಸದರಿ ಯಂತ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿವೆಯೇ ;

(ಆ) ಇಲ್ಲದಿದ್ದಲ್ಲಿ, ಈ ವ್ಯವಸ್ಥೆಯನ್ನು ಎಷ್ಟು ದಿವಸಗಳಲ್ಲಿ ಮಾಡಿಕೊಡುತ್ತೀರಿ;

(ಇ) ಬಡವರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಹಣ ನೀಡಿ, ಡಯಾಲಿಸಿಸ್ ಮಾಡಿಸಲು ತೊಂದರೆಯಾಗುವುದರಿಂದ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರವಾಗಿ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದೇ ?